# ಮುಂದಿನ ಸಮ್ಮೇಳನವನ್ನು ಕರ್ನಾಟಕದಲ್ಲಿ ಆಯೋಜಿಸುವಂತೆ ಮನವಿ

■ವಿಜಯಸಾಕ್ಷಿ ಸುದ್ದಿ, ಉದಯಪುರ



10ನೇ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಶನ್ ಸಮ್ಮೇಳನವನ್ನು ಕರ್ನಾಟಕದಲ್ಲಿ ಆಯೋಜಿಸುವಂತೆ ವಿಧಾನಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವಿಧಾನಸಭಾಧ್ಯಕ್ಷರಾದ ಯು.ಟಿ ಖಾದರ್ ಅವರು ಅಸೋಸಿಯೇಶನ್‌ನ ಅಧ್ಯಕ್ಷರಾದ ಬ್ರಿಟನ್‌ನ ಇಯಾನ್ ಲಿಡ್ಡೆಲ್ ಗ್ರಾಂಗರ್ ಇವರಿಗೆ ಜಂಟಿಯಾಗಿ ಮನವಿ ಮಾಡಿದರು.

ರಾಜಸ್ಥಾನದ ಉದಯಪುರದಲ್ಲಿ ನಡೆಯುತ್ತಿರುವ 9ನೇ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಶನ್ ಸಮಾವೇಶದಲ್ಲಿ ಭಾಗವಹಿಸಿದ ಸಂದರ್ಭದಲ್ಲಿ ಬ್ರಿಟನ್‌ನ ಇಯಾನ್ ಲಿಡ್ಡೆಲ್ ಗ್ರಾಂಗರ್ ಅವರಿಗೆ ಮನವಿ ಸಲ್ಲಿಸಿ ಅವರೊಂದಿಗೆ ಚರ್ಚಿಸುವ ಸಂದರ್ಭದಲ್ಲಿ, ಕರ್ನಾಟಕದ ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನ ಐತಿಹಾಸಿಕ ಹಿನ್ನೆಲೆಯ ಕುರಿತು ಸುದೀರ್ಘವಾಗಿ ವಿವರಿಸಿದರು.

10ನೇ ಸಮ್ಮೇಳನವನ್ನು ಕರ್ನಾಟಕದಲ್ಲಿ ಆಯೋಜಿಸಲು ಎಲ್ಲ ರೀತಿಯ ಸಹಾಯ-ಸಹಕಾರ ನೀಡುವುದಾಗಿ ಬಸವರಾಜ ಹೊರಟ್ಟಿ ಹಾಗೂ ಯು.ಟಿ ಖಾದರ್ ಅವರು ಹೇಳಿದರು.

ಮನವಿ ಆಲಿಸಿದ ಇಯಾನ್ ಲಿಡ್ಡೆಲ್ ಗ್ರಾಂಗರ್, ಈ ಕುರಿತು ರಾಷ್ಟ್ರೀಯ ಕಾಮನ್‌ವೆಲ್ತ್ ಅಸೋಸಿಯೇಶನ್ ಅಧ್ಯಕ್ಷರಾದ ಓಂ ಬಿರ್ಲಾರವರ ಉಪಸ್ಥಿತಿಯಲ್ಲಿ ನಡೆಯುವ ಬೋರ್ಡ್ ಮೀಟಿಂಗ್‌ನಲ್ಲಿ ಚರ್ಚಿಸಿ ನಿರ್ಧರಿಸುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ವಿಧಾನಪರಿಷತ್ತಿನ ಉಪಸಭಾಪತಿ ಎಂ.ಕೆ ಪ್ರಾಣೇಶ, ಅಧಿಕಾರಿ ವೃಂದದ ಪರವಾಗಿ ಪರಿಷತ್ತಿನ ಕಾರ್ಯದರ್ಶಿ ಕೆ.ಆರ್ ಮಹಾಲಕ್ಷ್ಮೀ, ಸಭಾಪತಿಗಳ ಆಪ್ತ ಕಾರ್ಯದರ್ಶಿ ಶೈಲಾ ಕೆ.ಡಿ ಮುಂತಾದವರು ಉಪಸ್ಥಿತರಿದ್ದರು.

# ರಾಜ್ಯದಲ್ಲಿ ಸಮಾವೇಶ ಆಯೋಜಿಸಲು ವಿಧಾನಸಭಾ ಅಧ್ಯಕ್ಷ, ಸಭಾಪತಿ ಮನವಿ

**ಉದಯಪುರ:** 10ನೇ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಷನ್ ಸಮ್ಮೇಳನವನ್ನು ಕರ್ನಾಟಕದಲ್ಲಿ ಆಯೋಜಿಸುವಂತೆ ವಿಧಾನಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಷನ್ ಅಧ್ಯಕ್ಷ ಬ್ರಿಟನ್‌ನ ಇಯಾನ್ ಲಿಡ್ಡೆಲ್ ಗ್ರ್ಯಾಂಗರ್ ಅವರಿಗೆ ಜಂಟಿಯಾಗಿ ಮನವಿ ಮಾಡಿದರು.

ರಾಜಸ್ಥಾನದ ಉದಯಪುರದಲ್ಲಿ ನಡೆಯುತ್ತಿರುವ 9ನೇ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಶನ್ ಸಮಾವೇಶದಲ್ಲಿ ಭಾಗವಹಿಸಿದ ವೇಳೆ ಬ್ರಿಟನ್‌ನ ಇಯಾನ್ ಲಿಡ್ಡೆಲ್ ಗ್ರ್ಯಾಂಗರ್ ಅವರಿಗೆ ಮನವಿ ಸಲ್ಲಿಸಿದರು. ಕರ್ನಾಟಕ ವಿಧಾನಪರಿಷತ್‌ಗೆ 114ಕ್ಕೂ ಹೆಚ್ಚು ವರ್ಷ ಇತಿಹಾಸವಿದೆ ಎಂದ ಸಭಾಪತಿ ಬಸವರಾಜ ಹೊರಟ್ಟಿ ತಮ್ಮ 43 ವರ್ಷಗಳ ವಿಧಾನಪರಿಷತ್ತಿನ ಅನುಭವ, ಸತತ 8 ಬಾರಿ ವಿಧಾನಪರಿಷತ್ತಿಗೆ ಆಯ್ಕೆಯಾಗಿ ದಾಖಲೆ, ಸಭಾಪತಿಯಾಗಿ ಸೇವೆ ಸಲ್ಲಿಸುತ್ತಿರುವ ಸಂಗತಿ ಇಯಾನ್ ಲಿಡ್ಡೆಲ್ ಗ್ರ್ಯಾಂಗರ್ ಗಮನಕ್ಕೆ ತಂದರು.

10ನೇ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಶನ್ ಸಮ್ಮೇಳನ ಕರ್ನಾಟಕದಲ್ಲಿ ಆಯೋಜಿಸಲು ಎಲ್ಲ ರೀತಿಯ ಸಹಾಯ ಸಹಕಾರ ನೀಡುವುದಾಗಿಬಸವರಾಜಹೊರಟ್ಟಿ,ಯು.ಟಿ.ಖಾದರ ಭರವಸೆ ನೀಡಿದರು. ಮನವಿ ಆಲಿಸಿದ ಇಯಾನ್ ಲಿಡ್ಡೆಲ್ ಗ್ರ್ಯಾಂಗರ್ ಅವರು ಈ ಸಂಬಂಧ ರಾಷ್ಟ್ರೀಯ ಕಾಮನ್‌ವೆಲ್ತ್ ಅಸೋಸಿಯೇಶನ್ ಅಧ್ಯಕ್ಷ ಓಂ ಬಿರ್ಲಾರ ಉಪಸ್ಥಿತಿಯಲ್ಲಿ ನಡೆಯುವ ಬೋರ್ಡ್ ಮೀಟಿಂಗ್‌ನಲ್ಲಿ ಚರ್ಚಿಸಿ ನಿರ್ಧರಿಸುವುದಾಗಿ ಇನಾನ್ ಅವರು ಭರವಸೆ ನೀಡಿದರು.



ಸಮ್ಮೇಳನ ಆಯೋಜಿಸುವ ಅವಕಾಶ ದೊರಕಿದಲ್ಲಿ 10ನೇ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಶನ್ ಸಮ್ಮೇಳನ ಕರ್ನಾಟಕದಲ್ಲಿ ಪ್ರಥಮ ಬಾರಿಗೆ ನಡೆಯಲಿದೆ. ಈ ವೇಳೆ ವಿಧಾನಪರಿಷತ್ತಿನ ಉಪಸಭಾಪತಿ ಎಂ.ಕೆ.ಪ್ರಾಣೇಶ, ಪರಿಷತ್ತಿನ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮಿ, ಸಭಾಪತಿಗಳ ಆಪ್ತ ಕಾರ್ಯದರ್ಶಿ ಶೈಲಾ ಕೆ.ಡಿ ಮುಂತಾದವರು ಇದ್ದರು.

# ರಾಜ್ಯದಲ್ಲಿ ಸಮಾವೇಶ ಆಯೋಜಿಸಲು ವಿಧಾನಸಭಾ ಅಧ್ಯಕ್ಷ, ಸಭಾಪತಿ ಮನವಿ



**ಉದಯಪುರ:** 10ನೇ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಷನ್ ಸಮ್ಮೇಳನವನ್ನು ಕರ್ನಾಟಕದಲ್ಲಿ ಆಯೋಜಿಸುವಂತೆ ವಿಧಾನಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಷನ್ ಅಧ್ಯಕ್ಷ ಬ್ರಿಟನ್‌ನ ಇಯಾನ್ ಲಿಡ್ಡೆಲ್ ಗ್ರಾಂಗರ್ ಅವರಿಗೆ ಜಂಟಿಯಾಗಿ ಮನವಿ ಮಾಡಿದರು.

ರಾಜಸ್ಥಾನದ ಉದಯಪುರದಲ್ಲಿ ನಡೆಯುತ್ತಿರುವ 9ನೇ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಶನ್ ಸಮಾವೇಶದಲ್ಲಿ ಭಾಗವಹಿಸಿದ ವೇಳೆ ಬ್ರಿಟನ್‌ನ ಇಯಾನ್ ಲಿಡ್ಡೆಲ್ ಗ್ರಾಂಗರ್ ಅವರಿಗೆ ಮನವಿ ಸಲ್ಲಿಸಿದರು. ಕರ್ನಾಟಕ ವಿಧಾನಪರಿಷತ್‌ಗೆ 114ಕ್ಕೂ ಹೆಚ್ಚು ವರ್ಷ ಇತಿಹಾಸವಿದೆ ಎಂದ ಸಭಾಪತಿ ಬಸವರಾಜ ಹೊರಟ್ಟಿ ತಮ್ಮ 43 ವರ್ಷಗಳ ವಿಧಾನಪರಿಷತ್ತಿನ ಅನುಭವ, ಸತತ 8 ಬಾರಿ ವಿಧಾನಪರಿಷತ್ತಿಗೆ ಆಯ್ಕೆಯಾಗಿ ದಾಖಲೆ, ಸಭಾಪತಿಯಾಗಿ ಸೇವೆ ಸಲ್ಲಿಸುತ್ತಿರುವ ಸಂಗತಿ ಇಯಾನ್ ಲಿಡ್ಡೆಲ್ ಗ್ರಾಂಗರ್ ಗಮನಕ್ಕೆ ತಂದರು.

10ನೇ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಶನ್ ಸಮ್ಮೇಳನ ಕರ್ನಾಟಕದಲ್ಲಿ ಆಯೋಜಿಸಲು ಎಲ್ಲ ರೀತಿಯ ಸಹಾಯ ಸಹಕಾರ ನೀಡುವುದಾಗಿಬಸವರಾಜಹೊರಟ್ಟಿ,ಯು.ಟಿ.ಖಾದರ ಭರವಸೆ ನೀಡಿದರು. ಮನವಿ ಆಲಿಸಿದ ಇಯಾನ್ ಲಿಡ್ಡೆಲ್ ಗ್ರಾಂಗರ್ ಅವರು ಈ ಸಂಬಂಧ ರಾಷ್ಟ್ರೀಯ ಕಾಮನ್‌ವೆಲ್ತ್ ಅಸೋಸಿಯೇಶನ್ ಅಧ್ಯಕ್ಷ ಓಂ ಬಿರ್ಲಾರ ಉಪಸ್ಥಿತಿಯಲ್ಲಿ ನಡೆಯುವ ಬೋರ್ಡ್ ಮೀಟಿಂಗ್‌ನಲ್ಲಿ ಚರ್ಚಿಸಿ ನಿರ್ಧರಿಸುವುದಾಗಿ ಇನಾನ್ ಅವರು ಭರವಸೆ ನೀಡಿದರು.

ಸಮ್ಮೇಳನ ಆಯೋಜಿಸುವ ಅವಕಾಶ ದೊರಕಿದಲ್ಲಿ 10ನೇ ಕಾಮನ್‌ವೆಲ್ತ್ ಪಾರ್ಲಿಮೆಂಟ್ ಅಸೋಸಿಯೇಶನ್ ಸಮ್ಮೇಳನ ಕರ್ನಾಟಕದಲ್ಲಿ ಪ್ರಥಮ ಬಾರಿಗೆ ನಡೆಯಲಿದೆ. ಈ ವೇಳೆ ವಿಧಾನಪರಿಷತ್ತಿನ ಉಪಸಭಾಪತಿ ಎಂ.ಕೆ.ಪ್ರಾಣೇಶ, ಪರಿಷತ್ತಿನ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮಿ, ಸಭಾಪತಿಗಳ ಆಪ್ತ ಕಾರ್ಯದರ್ಶಿ ಶೈಲಾ ಕೆ.ಡಿ ಮುಂತಾದವರು ಇದ್ದರು.